ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು, ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 2/2/2021

## ಅಶ್ಲೀಲ ಚಿತ್ರ ವೀಕ್ಷಣೆ: ಪರಿಶೀಲನೆಗೆ ಸಮಿತಿ

ಬೆಂಗಳೂರು: ವಿಧಾನ ಪರಿಷತ್ತಿನ ಸದಸ್ಯರೊಬ್ಬರು ಸದನದ ಒಳಗೆ ಜ.29ರಂದು ಕಲಾಪ ನಡೆಯುತ್ತಿರುವಾಗ ಅಶ್ಲೀಲ ಚಿತ್ರ ವೀಕ್ಷಿಸಿದ್ದಾರೆಂಬ ಕುರಿತು ಮಾಧ್ಯಮಗಳಲ್ಲಿ ಬಂದಿರುವ ವರದಿ ಬಗ್ಗೆ ತನಿಖೆ ನಡೆಸಲು ವಿಧಾನಪರಿಷತ್ ನೀತಿ ನಿರೂಪಣಾ ಸಮಿತಿಗೆ ಒಪ್ಪಿಸಿ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಆದೇಶಿಸಿದ್ದಾರೆ. ಸೋಮವಾರ ಕಲಾಪ ಆರಂಭವಾಗುತ್ತಿದ್ದಂತೆಯೇ ಪ್ರಕಟಣೆ ಹೊರಡಿಸಿದ ಸಭಾಪತಿಗಳು, 2020-21ನೇ ಸಾಲಿನ ವಿಧಾನಪರಿಷತ್ತಿನ ನೀತಿ ನಿರೂಪಣಾ ಸಮಿತಿಗೆ ಬಿ.ಕೆ. ಹರಿಪ್ರಸಾದ್, ಡಾ. ತೇಜಸ್ವಿನಿಗೌಡ, ಕೆ.ಟಿ. ಶ್ರೀಕಂಠೇಗೌಡ, ಎಸ್.ವಿ. ಸಂಕನೂರ, ಎನ್. ಅಪ್ಪಾಜಿಗೌಡ, ಪಿ.ಆರ್.ರಮೇಶ್ ಸದಸ್ಯರಾಗಿದ್ದು ಉಪ ಸಭಾಪತಿ ಎಂ.ಕೆ. ಪ್ರಾಣೇಶ್ ಅವರು ಸಮಿತಿ ಅಧ್ಯಕ್ಷರಾಗಿರುತ್ತಾರೆ ಎಂದು ತಿಳಿಸಿದರು. ಮಾಧ್ಯಮ ವರದಿ ಆಧರಿಸಿ ತನಿಖೆಯನ್ನು ನೀತಿ ನಿರೂಪಣಾ ಸಮಿತಿಗೆ ಒಪ್ಪಿಸಲಾಗಿದೆ. ಈ ವಿಷಯವಾಗಿ ವಿಚಾರಣೆ ಇಲ್ಲದೆ, ತನಿಖೆ ನಡೆದಾಗ ಮಾಧ್ಯಮಗಳು ಕೂಡ ಸಹಕರಿಸಬೇಕು ಎಂದು ಸಭಾಪತಿಗಳು ಸೂಚಿಸಿದರು.

